ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:2378/2022

ಚಾಸಾ:6 ಪ್ರಾಸಾ:4

ದಿನಾಂಕ: 29.08.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಪ್ರಸನ್ನ ಶೆಟ್ಟಿ |
| ತಂದೆಯ ಹೆಸರು | : | ಜಯಕರ ಶೆಟ್ಟಿ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಆಗಸ್ಟ್ 2022 ರಲ್ಲಿ ಪೊಲೀಸರು Shasthri Circle ನಲ್ಲಿರುವ ನಮ್ಮ ದ್ವಾರಕ ಹೊಟೇಲ್ ಗೆ ಬಂದು ಸಿಸಿ ಟಿವಿ ದೃಶ್ಯಾವಳಿಗಳು ಬೇಕು ಎಂದು ಹೇಳಿ ಪಡೆದುಕೊಂಡು ಹೋಗಿರುತ್ತಾರೆ. ಕಳ್ಳತನವಾದ ವಿಚಾರಕ್ಕೆ ಸಂಬಂಧಿಸಿದಂತೆ ಪ್ರಕರಣವಾಗಿದ್ದು, ಆತ ನಮ್ಮ ಹೊಟೇಲ್ ಗೆ ಬಂದು 500 ರೂಪಾಯಿ ಚಿಲ್ಲರೆ ಕೊಟ್ಟು ನೋಟನ್ನು ತೆಗೆದುಕೊಂಡು ಹೋಗಿರುತ್ತಾರೆ ಎಂದು ಪೊಲೀಸರು ಸಿಸಿ ಟಿವಿ ಫೂಟೇಜನ್ನು ನೋಡಿ ತಿಳಿಸಿರುತ್ತಾರೆ. ಪೊಲೀಸರಿಗೆ ನಾನು ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ಭಾಗಶಃ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ಸದ್ರಿ ದಿನ ನಾನು ಆರೋಪಿಯನ್ನು ಠಾಣೆಯಲ್ಲಿ ನೋಡಿ ಗುರುತಿಸಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಾದ ಶ್ರೀ ಆರ್ ಎಂ ಎಸ್ ರವರಿಂದ:**

ಯಾವ ದಿನಾಂಕದ ಸಿಸಿ ಟಿವಿ ಫ್ಯೂಟೇಜನ್ನು ಪೊಲೀಸರು ಪಡೆದಿರುತ್ತಾರೆ ಎಂದು ಹೇಳಲಾಗವುದಿಲ್ಲ. ಸದ್ರಿ ದೃಶ್ಯಾವಳಿಗಳಲ್ಲಿ ಏನು ಕಂಡು ಬಂತು ಎಂದು ನನಗೆ ಹೇಳಲಾಗುವುದಿಲ್ಲ.

ಚಿಲ್ಲರೆಯನ್ನು ಕೊಟ್ಟು ನಗದನ್ನು ಪಡೆದಿರುವುದಾಗಿ ಪೊಲೀಸರು ತಿಳಿಸಿರುತ್ತಾರೆ. ನನಗೆ ಆ ಬಗ್ಗೆ ವೈಯಕ್ತಿಕವಾಗಿ ಮಾಹಿತಿ ಇಲ್ಲ. ಪೊಲೀಸರು ನನ್ನನ್ನು ವಿಚಾರಿಸಿ ಹೇಳಿಕೆ ಪಡೆದಿಲ್ಲ. ನಾನು ಯಾವುದೇ ದಾಖಲೆಗೆ ಸಹಿ ಮಾಡಿಲ್ಲ.

**ಮರು ವಿಚಾರಣೆ:** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**